ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: PM - (Covid-19.)

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 13/9/20

# ಕೊರೊನಾ: ಎಚ್ಚರ ತಪ್ಪಬೇಡಿ

## ಇನ್ನೂ ಲಸಿಕೆ ಬಂದಿಲ್ಲ ಎಂದ ಪ್ರಧಾನಿ

- ವರ್ಚ್ಯುವಲ್ ಕಾರ್ಯಕ್ರಮದಲ್ಲಿ ಮಾತನಾಡಿದ ನರೇಂದ್ರ ಮೋದಿ
- ಕೊರೊನಾ ತಗ್ಗುವವರೆಗೆ ನಿರ್ಲಕ್ಷ್ಯ ಮಾಡಬಾರದೆಂದು ಕಿವಿಮಾತು
- ಪಿಎಂಎವೈ ಯೋಜನೆಯ ಫಲಾನುಭವಿಗಳಿಗೆ ಮನೆ ಹಸ್ತಾಂತರ



ಭೋಪಾಲ್: 'ಎಲ್ಲಿಯವರೆಗೆ ಲಸಿಕೆ ಲಭ್ಯವಿಲ್ಲವೋ, ಅಲ್ಲಿಯವರೆಗೆ ನಿರ್ಲಕ್ಷ್ಯ ಕೂಡ ಸಲ್ಲದು' ಎಂದು ದೇಶಬಾಂಧವರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.

ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ (ಪಿಎಂಎವೈ), ಮಧ್ಯಪ್ರದೇಶದಲ್ಲಿ ಬಡವರಿಗೆ ನಿರ್ಮಿಸಲಾಗಿರುವ 1.75 ಲಕ್ಷ ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರ ಮಾಡುವ ವರ್ಚುವಲ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೊರೊನಾ ಮುನ್ನೆಚ್ಚರಿಕೆಗಳನ್ನು ಜನರು ಕ್ರಮೇಣ ನಿರ್ಲಕ್ಷಿಸಬಾರದು ಎಂದು ಕಿವಿಮಾತು ಹೇಳಿದರು.

"ಜನರ ಒಳಿತಿಗಾಗಿಯೇ ಕೊರೊನಾ ಮಾರ್ಗಸೂಚಿಗಳನ್ನು ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಜಾರಿಗೊಳಿಸಲಾಗಿದೆ. ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು, ಮಾಸ್ಕ್ ಧರಿಸುವುದು ಸೇರಿದಂತೆ ಎಲ್ಲಾ ಮುನ್ನೆಚ್ಚರಿಕೆಗಳನ್ನೂ ಕಡ್ಡಾಯವಾಗಿ ಪಾಲಿಸಬೇಕು" ಎಂದರು.

ಅದನ್ನೇ ಕವನದ ರೂಪದಲ್ಲಿ, "ಎಲ್ಲಿಯವರೆಗೆ ಲಸಿಕೆ ಲಭ್ಯವಿಲ್ಲವೋ, ಅಲ್ಲಿಯವರೆಗೆ ನಿರ್ಲಕ್ಷ್ಯ ಸಲ್ಲದು... ಎರಡು ಗಜದ ಅಂತರ, ಮಾಸ್ಕ್ ನಿರಂತರ ಮರೆಯಬಾರದು" ಎಂದು ವಿವರಿಸಿದರು.

ಈ ಮಧ್ಯೆ ಲಾಕ್‌ಡೌನ್ ಅವಧಿಯಲ್ಲಿ ಹೆಚ್ಚು ಗೃಹ ನಿರ್ಮಾಣ ಕೆಲಸಗಳಾಗಿವೆ ಎಂದು ಪ್ರಧಾನಿ ಮೋದಿ ಅವರು ಅಭಿಪ್ರಾಯಪಟ್ಟರು.